# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 154, ಬಸವನಗುಡಿ ಬೆಂಗಳೂರು.

ಸಂಖ್ಯೆ: ಸ.ಅ/ವಾ-154/2022-23 ದಿನಾಂಕ: 20-09-2022

## ವಾರ್ಡ್ ಸಮಿತಿ ಸಭೆಯ ನಡವಳಿಗಳು

************

ವಿಷಯ: ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ: ಬಿ12(5)/ಪಿಆರ್/35/2020-21, ದಿನಾಂಕ: 21-09-2020ರ ಆದೇಶದಂತೆ ದಿನಾಂಕ: 17-09-2022 ಶನಿವಾರ ವಾರ್ಡ್ ಸಂಖ್ಯೆ: 154, ಬಸವನಗುಡಿ ವಾರ್ಡ್ ಕಛೇರಿಯಲ್ಲಿ ನಡೆದ ಸೆಪ್ಟೆಂಬರ್ ತಿಂಗಳ 2ನೇ ವಾರ್ಡ್ ಸಮಿತಿ ಸಭೆಯ ನಡವಳಿಗಳು

ಸ್ಥಳ: ಬಿಬಿಎಂಪಿ ವಾರ್ಡ್ ಕಛೇರಿ, ಬಸವನಗುಡಿ, ಎನ್.ಆರ್. ಕಾಲೋನಿ ಹತ್ತಿರ
ಸಮಯ: ಬೆಳಗ್ಗೆ 11.00 ಗಂಟೆಗೆ

**ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಮಂಜುನಾಥ ರೆಡ್ಡಿ | ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು |
| 2 | ಶ್ರೀ ಟಿ. ಕೃಷ್ಣಮೂರ್ತಿ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್-154, ಬಸವನಗುಡಿ |
| 3 | ಶ್ರೀ. ಎಂ. ಕೃಷ್ಣಮೂರ್ತಿ | ಕಿರಿಯ ಅಭಿಯಂತರರು |
| 4 | ಶ್ರೀಮತಿ. ಮಾಲಿನಿ. ಎಂ | ಬೀದಿ ದೀಪ ನಿರ್ವಹಣೆ |
| 5 | ಕು. ಮಂಜುಶ್ರೀ | ಕಿರಿಯ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) |
| 6 | ಶ್ರೀ. ಬಿ.ಪಿ. ಮಂಜುಯಾದವ್ | ಸಹಾಯಕ ಅಭಿಯಂತರರು (ಬೆಸ್ಕಾಂ) |
| 7 | ಶ್ರೀ. ಅನಿಲ್ ಕುಮಾರ್ | ಮಾರ್ಷಲ್ |
| 8 | ಶ್ರೀ. ಪ್ರತಾಪ್ ಪಿ.ಎಸ್.ಐ | ಬಸವನಗುಡಿ ಪೋಲೀಸ್ ಠಾಣೆ |
| 9 | ಶ್ರೀ. ನೂರೆ | ಸಾರ್ವಜನಿಕರು |
| 10 | ಶ್ರೀ. ಉಮೇಶ್ | ಸಾರ್ವಜನಿಕರು |
| 11 | ಶ್ರೀ.ಬಿ. ರಾಜು | ಸಾರ್ವಜನಿಕರು |
| 12 | ಶ್ರೀಮತಿ. ಸತ್ಯಲಕ್ಷ್ಮಿ | ಸಾರ್ವಜನಿಕರು |
| 13 | ಶ್ರೀ. ಸಂಜಯ್ ಪಾಟೀಲ್ | ಸಾರ್ವಜನಿಕರು |
| 15 | ~~ಶ್ರೀ. ಅನಿಲ್ ಕುಮಾರ್~~ | ಸಾರ್ವಜನಿಕರು |
| 16 | ಶ್ರೀ.ಎಸ್. ಶ್ರೀಧರ್ | ಸಾರ್ವಜನಿಕರು |
| 17 | ಶ್ರೀ. ಶ್ರೀಕಾಂತ್ ಪಡಕಿ | ಸಾರ್ವಜನಿಕರು |
| 18 | ಶ್ರೀ.ಬಿ.ಕೆ. ಶ್ರೀನಿವಾಸ್ | ಸಾರ್ವಜನಿಕರು |
| 19 | ಶ್ರೀ. ರಾಜೇಶ್. ಆರ್ | ಸಾರ್ವಜನಿಕರು |
| 20 | ಶ್ರೀ. ಚಂದ್ರು | ಸಾರ್ವಜನಿಕರು |
| 21 | ಶ್ರೀ. ಅಕ್ಷಯ ಜಿ. ಕುಂಬ್ಳೆ | ಸಾರ್ವಜನಿಕರು |
| 22 | ಶ್ರೀ. ಗಿರಿವಾಸಲುನಾಯ್ಡು | ಸಾರ್ವಜನಿಕರು |

ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳಾದ ಶ್ರೀ. ಮಂಜುನಾಥ ರೆಡ್ಡಿ ರವರು ಸಭೆಯಲ್ಲಿ ಹಾಜರಿದ್ದ ಎಲ್ಲಾ ಅಧಿಕಾರಿಗಳಿಗೆ ಮತ್ತು ಸದಸ್ಯರಿಗೆ ಸ್ವಾಗತ ಕೋರುವುದರೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.



Scanned with CamScanner

1. ಸಭೆಯಲ್ಲಿ ಸಾರ್ವಜನಿಕರು ವಾರ್ಡ್ ವ್ಯಾಪ್ತಿಯಲ್ಲಿನ ಕೆಲವು ಪ್ರಮುಖ ರಸ್ತೆಗಳಾದ ಪುಟ್ಟಣ್ಣ ರಸ್ತೆ, ಮಾರ್ಕೆಟ್ ರಸ್ತೆ ಇತ್ಯಾದಿ ರಸ್ತೆಗಳಲ್ಲಿ ವಾರಸುದಾರರಿಲ್ಲದ ವಾಹನಗಳನ್ನು ಹಾಗೂ ಪಾದಚಾರಿ ರಸ್ತೆಗಳಲ್ಲಿ ಅನಧಿಕೃತ ತಳ್ಳುವ ಗಾಡಿಗಳಲ್ಲಿ ತರಕಾರಿ ಇತ್ಯಾದಿ ಮಾರಾಟ ಮಾಡಲು ಗಾಡಿಗಳನ್ನು ನಿಲ್ಲಿಸುವುದರಿಂದ ರಸ್ತೆಯಲ್ಲಿ ಸಾರ್ವಜನಿಕರ ಓಡಾಟಕ್ಕೆ ತೊಂದರೆಯಾಗುತ್ತಿದ್ದು ಸದರಿ ವಾಹನಗಳನ್ನು ಹಾಗೂ ಪಾದಚಾರಿ ರಸ್ತೆಗಳಲ್ಲಿನ ತರಕಾರಿ ತಳ್ಳುವ ಗಾಡಿಗಳನ್ನು ತೆರವುಗೊಳಿಸಲು ಕ್ರಮಕೈಗೊಳ್ಳುವ ಬಗ್ಗೆ ಹಿಂದಿನ ಸಭೆಯಲ್ಲಿ ಸಾರ್ವಜನಿಕರು ಕೋರಿರುತ್ತಾರೆ ಈ ಬಗ್ಗೆ ಸಭೆಯಲ್ಲಿ ಹಾಜರಿದ್ದ ಪೋಲೀಸ್ ಅಧಿಕಾರಿಗಳು ವಾರ್ಡ್ ಅಭಿಯಂತರರೊಂದಿಗೆ ತಪಾಸಣೆ ನಡೆಸಿ, ಕ್ರಮಕೈಗೊಳ್ಳುವುದಾಗಿ ತಿಳಿಸಿರುತ್ತಾರೆ. ರಸ್ತೆಗಳಲ್ಲಿ ಅನಧಿಕೃತವಾಗಿ ವಾಹನ ನಿಲುಗಡೆ ಮಾಡಿದಲ್ಲಿ ಪೋಲೀಸ್ ಸಹಾಯವಾಣಿ 112 ಕ್ಕೆ ಕರೆ ಮಾಡಲು ಪೋಲೀಸ್ ಅಧಿಕಾರಿಗಳು ಸಭೆಯಲ್ಲಿ ತಿಳಿಸಿರುತ್ತಾರೆ.

2. ಸಭೆಯಲ್ಲಿ ಹಾಜರಿದ್ದ ಬೀದಿ ದೀಪಗಳ ನಿರ್ವಹಣಾ ಗುತ್ತಿಗೆದಾರರು ವಾರ್ಡ್ ವ್ಯಾಪ್ತಿಯಲ್ಲಿ ವಿದ್ಯುತ್ ದೀಪಗಳ ಸಮರ್ಥ ನಿರ್ವಹಣೆ ಬಗ್ಗೆ ತಿಳಿಸಿರುತ್ತಾರೆ. ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ವಾರ್ಡ್ ವ್ಯಾಪ್ತಿಯಲ್ಲಿನ ಕೆಲವು ರಸ್ತೆಗಳಲ್ಲಿ ಹಳೆಯ ಬೀದಿ ದೀಪಗಳು ಇದ್ದು ಅದನ್ನು ಹೊಸ ಎಲ್.ಇ.ಡಿ ದೀಪಗಳಿಗೆ ಬದಲಾಯಿಸಿಕೊಡಲು ಕೋರಿರುತ್ತಾರೆ. ಈ ಬಗ್ಗೆ ಕ್ರಮವಹಿಸುವುದಾಗಿ ಗುತ್ತಿಗೆದಾರರು ಸಭೆಯಲ್ಲಿ ತಿಳಿಸಿರುತ್ತಾರೆ.

3. ವಾರ್ಡ್ ವ್ಯಾಪ್ತಿಯಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ವತಿಯಿಂದ ನೀರು ಬಿಡುವ ಸಮಯದ ಬದಲಾವಣೆಯಾಗಿದ್ದು ಈ ಬದಲಾವಣೆಯ ಸಮಯವು ಸಾರ್ವಜನಿಕರಿಗೆ ಅನಾನುಕೂಲವಾಗಿರುವುದರಿಂದ ಈ ಬಗ್ಗೆ ಸದರಿಯವರಿಗೆ ತಿಳಿಸಿ ಕ್ರಮಕೈಗೊಳ್ಳಲು ಸಭೆಯಲ್ಲಿ ಸಾರ್ವಜನಿಕರು ಕೋರಿರುತ್ತಾರೆ. ಈ ಬಗ್ಗೆ ಸಭೆಯಲ್ಲಿ ಹಾಜರಿದ್ದ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳು ಸದರಿ ಸಮಸ್ಯೆಯ ಬಗ್ಗೆ ಕೇಂದ್ರ ಕಛೇರಿಗೆ ಪತ್ರ ಬರೆದು ಕ್ರಮಕೈಗೊಳ್ಳುವುದಾಗಿ ತಿಳಿಸಿರುತ್ತಾರೆ. ಮತ್ತು ಜವರಯ್ಯಗಾರ್ಡನ್‌ನ 3ನೇ ಹಾಗೂ 4ನೇ ಅಡ್ಡರಸ್ತೆಯಲ್ಲಿ ಒಳಚರಂಡಿ ಕೊಳವೆಯು ಹಾಳಾಗಿದ್ದು ದುರಸ್ಥಿಮಾಡಿಸುವ ಬಗ್ಗೆಯೂ ಕ್ರಮಕೈಗೊಳ್ಳುವುದಾಗಿ ಸಭೆಗೆ ತಿಳಿಸಿರುತ್ತಾರೆ.

4. ಬಸವನಗುಡಿ ವಾರ್ಡ್ ವ್ಯಾಪ್ತಿಯ ಪೋಲೀಸ್ ಠಾಣಾ ರಸ್ತೆ, ಜೈನ್ ಕ್ಲಿನಿಕ್ ಮುಂಭಾಗ ಬೈ ಟು ಕಾಫಿ ಹೋಟೆಲ್‌ನ ಸುತ್ತಮುತ್ತ ಬೀಳುವ ಶಿಥಿಲವಾಗಿರುವ ಮರದ ರೆಂಬೆ ಕೊಂಬೆಗಳನ್ನು ತೆರವುಗೊಳಿಸಿಕೊಡಲು ಸಾರ್ವಜನಿಕರು ಸಭೆಯಲ್ಲಿ ಕೋರಿರುತ್ತಾರೆ ಮತ್ತು ಮುಂದಿನ ಸಭೆಗೆ ಅರಣ್ಯ ಅಧಿಕಾರಿಗಳನ್ನು ಕಡ್ಡಾಯವಾಗಿ ಸಭೆಗೆ ಹಾಜರಾಗಲು ಸಂಬಂಧಿಸಿದವರಿಗೆ ಸೂಚಿಸಲು ಸಾರ್ವಜನಿಕರು ಕೋರಿರುತ್ತಾರೆ. ಈ ಬಗ್ಗೆ ಅರಣ್ಯ ಅಧಿಕಾರಿಗಳಿಗೆ ಪತ್ರ ಬರೆದು ಕ್ರಮಕೈಗೊಳ್ಳುವ ಬಗ್ಗೆ ನೋಡಲ್ ಅಧಿಕಾರಿಗಳು ಸಭೆಯಲ್ಲಿ ತಿಳಿಸಿರುತ್ತಾರೆ.

5. ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರೊಬ್ಬರು ಮಾಡಲ್‌ಹೌಸ್ ಸುತ್ತಮುತ್ತ ಬೀದಿ ನಾಯಿಗಳ ಹಾವಳಿ ಹೆಚ್ಚಾಗಿದ್ದು, ಅವುಗಳನ್ನು ನಿಯಂತ್ರಿಸಲು ಸಭೆಯಲ್ಲಿ ಕೋರಿರುತ್ತಾರೆ. ಈ ಬಗ್ಗೆ ಕ್ರಮಕೈಗೊಳ್ಳಲು Animal Husbandary ಇಲಾಖೆ ರವರಿಗೆ ಪತ್ರ ಬರೆಯಲು ನೋಡಲ್ ಅಧಿಕಾರಿಗಳು ಸಮಿತಿ ಕಾರ್ಯದರ್ಶಿಗಳಾದ ವಾರ್ಡ್ ಅಭಿಯಂತರರಿಗೆ ಸಭೆಯಲ್ಲಿ ಸೂಚಿಸಿರುತ್ತಾರೆ.

6. ಸಭೆಯಲ್ಲಿ ವಾರ್ಡ್ ವ್ಯಾಪ್ತಿಯಲ್ಲಿನ ಟಾಟಾ ಸಿಲ್ಕ್ ಫಾರಂ ಸುತ್ತಮುತ್ತ ಹಾಗೂ ಹೆಚ್ಚು ವಾಣಿಜ್ಯ ಕೇಂದ್ರಗಳಿರುವ ರಸ್ತೆಗಳಲ್ಲಿ ಮತ್ತು ಕನ್ಸರ್‌ವೆನ್ಸಿಗಳಲ್ಲಿ ಬಿದ್ದಿರುವ ತ್ಯಾಜ್ಯವನ್ನು ತೆಗೆಯಲು ಸಭೆಯಲ್ಲಿ ಸಾರ್ವಜನಿಕರು ಕೋರಿರುತ್ತಾರೆ. ಈ ಬಗ್ಗೆ ಘನತ್ಯಾಜ್ಯ ಸಂಗ್ರಹಣಾ ವಿಭಾಗದವರಿಗೆ ಮಾಹಿತಿ ನೀಡಿ ವಾರ್ಡ್ ವ್ಯಾಪ್ತಿಯಲ್ಲಿ ತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿಯನ್ನು ಸಮರ್ಪಕವಾಗಿ ನಿರ್ವಹಿಸಲು ಘನತ್ಯಾಜ್ಯ ನಿರ್ವಹಣಾ ವಿಭಾಗದವರಿಗೆ ತಿಳಿಸಿ ಕ್ರಮಕೈಗೊಳ್ಳುವುದಾಗಿ ನೋಡಲ್ ಅಧಿಕಾರಿಗಳು ಸಭೆಯಲ್ಲಿ ತಿಳಿಸಿರುತ್ತಾರೆ.



Scanned with CamScanner

7. ವಾರ್ಡ್ ವ್ಯಾಪ್ತಿಯಲ್ಲಿ ಓ.ಎಫ್.ಸಿ ಕೇಬಲ್ ಅಳವಡಿಕೆಗಾಗಿ ಅವ್ಯಾಹತವಾಗಿ ರಸ್ತೆ ಅಗೆತ ಮಾಡುತ್ತಿದ್ದು, ಇದರಿಂದ ರಸ್ತೆಗಳು ಹಾಳಾಗುತ್ತಿರುವ ಬಗ್ಗೆ ಸಭೆಯಲ್ಲಿ ಸಾರ್ವಜನಿಕರು ತಿಳಿಸಿರುತ್ತಾರೆ. ಮೂಕಾಂಬಿಕ ಶಾಲಾ ರಸ್ತೆಗೆ ಡಾಂಬರು ಹಾಕುವುದು, ಸುಬ್ಬರಾಮಚೆಟ್ಟಿ ರಸ್ತೆ, ನೆಟ್ಟಕಲ್ಲಪ್ಪ ವೃತ್ತ ಸುತ್ತಮುತ್ತಲಿನ ರಸ್ತೆಗಳಲ್ಲಿನ ಪಾದಚಾರಿ ಮಾರ್ಗಗಳನ್ನು ದುರಸ್ಥಿಗೊಳಿಸಲು ಸಭೆಯಲ್ಲಿ ಸಾರ್ವಜನಿಕರು ಕೋರಿರುತ್ತಾರೆ. ಸುಬ್ಬರಾಮಚೆಟ್ಟಿ ರಸ್ತೆ ಮತ್ತು ನೆಟ್ಟಕಲ್ಲಪ್ಪ ವೃತ್ತದ ರಸ್ತೆಯು ಬೃಹತ್ ರಸ್ತೆ ಮತ್ತು ಮೂಲಭೂತ ಸೌಕರ್ಯ ಇಲಾಖೆಗೆ ಸಂಬಂಧಿಸಿದ್ದಾಗಿದ್ದು, ಸದರಿಯವರಿಗೆ ಪತ್ರ ಬರೆದು ಕ್ರಮವಹಿಸಲು ತಿಳಿಸಲು ನೋಡಲ್ ಅಧಿಕಾರಿಗಳು ಸಭೆಯಲ್ಲಿ ತಿಳಿಸಿರುತ್ತಾರೆ. ಮುಂದುವರೆದು ನೆಟ್ಟಕಲ್ಲಪ್ಪ ವೃತ್ತದಲ್ಲಿನ ಗಣೇಶ ದೇವಸ್ಥಾನದ ಮೈದಾನದಲ್ಲಿ ಕಾಮಗಾರಿಯು ಸಮರ್ಪಕವಾಗಿ ಆಗಿರುವುದಿಲ್ಲದರ ಬಗ್ಗೆ ಸಾರ್ವಜನಿಕರು ಗಮನ ಸೆಳೆದಿದ್ದು, ಸದರಿ ಮೈದಾನವು ಯೋಜನೆ (ದಕ್ಷಿಣ) ವಿಭಾಗ ವ್ಯಾಪ್ತಿಗೆ ಬರುವುದರಿಂದ ಸದರಿ ವಿಷಯವನ್ನು ಕಾರ್ಯಪಾಲಕ ಅಭಿಯಂತರರು. ಯೋಜನೆ (ದಕ್ಷಿಣ) ರವರಿಗೆ ಸೂಕ್ತ ಕ್ರಮಕೈಗೊಳ್ಳಲು ತಿಳಿಸುವುದಾಗಿ ವಾರ್ಡ್ ಅಭಿಯಂತರರು ಸಭೆಯಲ್ಲಿ ತಿಳಿಸಿರುತ್ತಾರೆ. ವಾರ್ಡ್ ವ್ಯಾಪ್ತಿಯಲ್ಲಿನ ಎಸ್.ಎಸ್.ಎಂ ಶಾಲಾ ಮುಂಭಾಗದ ಇಂದಿರಾ ಕ್ಯಾಂಟೀನ್‌ನ ದುರಸ್ಥಿ ಮತ್ತು ಕ್ಯಾಂಟೀನ್ ಮುಂಭಾಗದ ನೆಲಹಾಸನ್ನು ಸರಿಪಡಿಸಲು ಸಾರ್ವಜನಿಕರು ಸಭೆಯಲ್ಲಿ ಕೋರಿರುತ್ತಾರೆ. ಈ ಬಗ್ಗೆ ವಾರ್ಡ್‌ನ ವಾರ್ಷಿಕ ಕಾರ್ಯಕ್ರಮ ಪಟ್ಟಿಯಲ್ಲಿ ಕಾಮಗಾರಿಯನ್ನು ಸೇರಿಸಿ ದುರಸ್ಥಿ ಮಾಡಿಕೊಡುವುದಾಗಿ ಅಭಿಯಂತರರು ಸಭೆಯಲ್ಲಿ ತಿಳಿಸಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಪರಿಗಣಿಸಿ ಅಧ್ಯಕ್ಷರು ರವರು ಈ ವಿಷಯಗಳ ಬಗ್ಗೆ ಮುಂದಿನ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ, ವಂದನೆಗಳೊಂದಿಗೆ ಈ ಸಭೆಯನ್ನು ಅಧ್ಯಕ್ಷರು ಮುಕ್ತಾಯಗೊಳಿಸಿದರು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ: 154, ಬಸವನಗುಡಿ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 154, ಬಸವನಗುಡಿ



Scanned with CamScanner